# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 122 | Pages. 2 | Date: 14-03-2025, FRIDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 122 - ಪುಟಗಳು : 2 - 14 ಮಾರ್ಚ್ 2025 ಶುಕ್ರವಾರ Ph: 8762954248 ದರ : ₹1


## ಸಂಭ್ರಮದ ಲಕ್ಷ್ಮೀ ನರಸಿಂಹಸ್ವಾಮಿ ರಥೋತ್ಸವ



### ಹೋಳಿ ಹಬ್ಬ ಆಚರಿಸಿದ ಯುವಕರು

### ತಾಲ್ಲೂಕು ಆಡಳಿತದಿಂದ ಪ್ರಸಾದ ವಿತರಣೆ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹೊಳೆನರಸೀಪುರ/ಅರಕಲಗೂಡು: ಹೊಳೆನರಸೀಪುರ ಹಾಗೂ ಅರಕಲಗೂಡಿನಲ್ಲಿ ಗುರುವಾರ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ಮಹಾ ರಥೋತ್ಸವ ಗೋವಿಂದನ ನಾಮ ಸ್ಮರಣೆಯೊಂದಿಗೆ ವೈಭವದಿಂದ ನೆರವೇರಿದವು.

ಪ್ರತಿ ಸಂವತ್ಸರದ ಪಾಲ್ಗುಣ ಮಾಸದ ಶುಕ್ಲ ಪಕ್ಷದ ಚತುರ್ಥಿಯಂದು ಮಹೋತ್ಸವ ಜರುಗುತ್ತದೆ. ಪವಿತ್ರ ಹೇಮಾವತಿ ನದಿ ತೀರದಲ್ಲಿ ವೀರಾಜಮಾನನಾದ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿಯನ್ನು ಶುಭ ಲಗ್ನದಲ್ಲಿ ರಥಾರೋಹಣಗೊಳಿಸಲಾಯಿತು.

ದೇವಾಲಯದ ತ್ರಿಕೂಟಾಚಲ ಸನ್ನಿಧಿಯಲ್ಲಿ ದರ್ಶನ ಪಡೆದ ಭಕ್ತರು, ರಥೋತ್ಸವದಲ್ಲಿ ಪಾಲ್ಗೊಂಡರು. ಹಣ್ಣು, ಧವನ ರಥಕ್ಕೆ ಸಮರ್ಪಿಸಿ ಭಕ್ತಿಭಾವ ಸಮರ್ಪಿಸಿದರು. ಹೋಳಿ ಹುಣ್ಣಿಮೆಯ ದಿನ ರಥೋತ್ಸವ ಮುಹೂರ್ತ ಇದ್ದ ಕಾರಣ ಯುವಕರು ಬಣ್ಣದಲ್ಲಿ ಮಿಂದೆದ್ದರು.

ವಿವಾದಕ್ಕೆ ತೆರೆ: ತಾಲ್ಲೂಕು ಆಡಳಿತ ಮೊದಲ ಬಾರಿಗೆ ರಾಜಕೀಯ ಪಕ್ಷದವರ ಪ್ರಸಾದ ವಿನಿಯೋಗದ ಗೊಂದಲಕ್ಕೆ ಆಸ್ಪದ ನೀಡದೇ ವಿವಾದಕ್ಕೆ ತೆರೆ ಎಳೆದರು. ರಾಜಕೀಯ ನಾಯಕರು ಹಾಗು ಭಕ್ತರು ದೇಣಿಗೆ ನೀಡಿ ಸಹಕರಿಸಿದರು. ರಥೋತ್ಸವ ಮತ್ತು ಜಾತ್ರಾ ವಿಶೇಷತೆಯಲ್ಲಿ ಪಟ್ಟಣದ ಪ್ರಮುಖ ಬೀದಿಗಳು, ವೃತ್ತ ಹಾಗೂ ಕಚೇರಿಗಳು ವಿದ್ಯುತ್ ದೀಪಾಲಂಕಾರದಿಂದ ಝಗಮಗಿಸುತ್ತಿದ್ದವು. ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಸಹಸ್ರಾರು ಭಕ್ತರು, ನದಿ ಸ್ನಾನ, ದೇವರ ದರ್ಶನ, ರಥೋತ್ಸವ ಮತ್ತು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡರು. ಯಾತ್ರಿಕರಿಗೆ ಅಲ್ಲಲ್ಲಿ ಮಜ್ಜಿಗೆ, ಪಾನಕ, ಕೋಸಂಬರಿ ವಿತರಣೆ ಭಕ್ತರ ದಾಹ ತಣಿಸಿತು.

ಅರ್ಚಕರಾದ ನಾರಾಯಣಭಟ್, ಸಿಂಹಾದ್ರಿ ಆಚಾರ್ಯತ್ವದಲ್ಲಿ ಪೂಜಾ ವಿಧಿ ವಿಧಾನ ನೆರವೇರಿತು. ಆಗಮನಕಾರರಾದ ಜನಾರ್ಧನ ಭಟ್, ರವಿಕುಮಾರ್ ಪೂಜಾ ಕೈಂಕರ್ಯ ನೆರವೇರಿಸಿದರು.

ಶಾಸಕ ಹೆಚ್.ಡಿ. ರೇವಣ್ಣ, ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ, ಸಂಸದ ಶ್ರೇಯಸ್ ಪಟೇಲ್, ತಹಶೀಲ್ದಾರ್ ರೇಣುಕುಮಾರ್, ಎಎಸ್ಪಿ ಶಾಲು, ವೃತ್ತ ನಿರೀಕ್ಷಕ ಪ್ರದೀಪ್ ರಥೋತ್ಸವದಲ್ಲಿ ಭಾಗಿಯಾದರು.

**ಅರಕಲಗೂಡು ವರದಿ:**

ಪಟ್ಟಣದ ಕೋಟೆ ಐತಿಹಾಸಿಕ ಲಕ್ಷ್ಮೀನರಸಿಂಹ ಸ್ವಾಮಿ ಬ್ರಹ್ಮ ರಥೋತ್ಸವ ವೈಭವದಿಂದ ನೆರವೇರಿತು.

ಬೆಳಿಗ್ಗೆ ಮೂಲ ವಿಗ್ರಹಕ್ಕೆ ಪಂಚಾಮೃತ ಅಭಿಷೇಕ ನಡೆಸಿ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಉತ್ಸವ ಮೂರ್ತಿಗಳನ್ನು ಅಲಂಕರಿಸಿ ಪೂಜೆ ಸಲ್ಲಿಸಿದ ಬಳಿಕ ಕೃಷ್ಣ ಗಂಧೋತ್ಸವ ನೆರವೇರಿತು. ಉತ್ಸವದಲ್ಲಿ ದೇವರ ಮೂರ್ತಿಗಳನ್ನು ಸಿಂಗರಿಸಿದ್ದ ರಥದಲ್ಲಿ ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಲಾಯಿತು. ತಹಶೀಲ್ದಾರ್ ಕೆ.ಸಿ. ಸೌಮ್ಯ ರಥಕ್ಕೆ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ನೆರೆದಿದ್ದ ಅಪಾರ ಸಂಖ್ಯೆಯ ಭಕ್ತರು ಗೋವಿಂದನಾಮ ಸ್ಮರಣೆ ಮಾಡುತ್ತಾ ರಥಬೀದಿಯಲ್ಲಿ ತೇರನ್ನು ಎಳೆದು ಸಂಭ್ರಮಿಸಿದರು. ಸುಡು ಬಿಸಿಲಿನಲ್ಲಿ ತೇರನ್ನು ಎಳೆಯುತ್ತಿದ್ದ ಭಕ್ತರಿಗೆ ಮನೆ, ಮನೆಗಳಲ್ಲಿ, ನೀರು, ಮಜ್ಜಿಗೆ, ಪಾನಕ ಮುಂತಾದ ತಂಪು ಪಾನೀಯಗಳನ್ನು ನೀಡಿ ದಾಹ ತಣಿಸಲಾಯಿತು.



### ಸಕಲರ ಒಳಿತಿಗೆ ಪ್ರಾರ್ಥನೆ: ಸಂಸದ

ಹೊಳೆನರಸೀಪುರ ರಥೋತ್ಸವದಲ್ಲಿ ಭಾಗವಹಿಸಿದ ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಕ್ಷೇತ್ರದಾದ್ಯಂತ ಸಾವಿರಾರು ಭಕ್ತರು ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗಿದ್ದು ಭಕ್ತಾದಿಗಳು ನಿತ್ಯವೂ ಬದುಕಿನಲ್ಲಿ ನೆಮ್ಮದಿಯನ್ನು ಕಂಡುಕೊಳ್ಳುವುದರ ಮೂಲಕ ಮಾದರಿಯಾಗಿ ಜೀವನ ರೂಪಿಸಿಕೊಳ್ಳಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಿದ್ದೇನೆ ಎಂದರು.

ಕೋಟೆ ರಾಜಬೀದಿ ಮೂಲಕ ಸಾಗಿ ಬಂದ ಸಂಸದರು ಕೋಟೆ ಮಾರಮ್ಮನ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿದರು. ರಥೋತ್ಸವ ಪ್ರಯುಕ್ತ ರಸ್ತೆ ಬದಿಯಲ್ಲಿ ಮಾರಾಟ ಮಾಡುವ ತಿಂಡಿ ತಿನಿಸನ್ನು ಸವಿದು ಸರಳತೆಯನ್ನು ಸಾದರಪಡಿಸಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಟಿ.ಲಕ್ಷ್ಮಣ, ಪುರಸಭಾ ಮಾಜಿ ಅಧ್ಯಕ್ಷ ಎಚ್.ವಿ. ಪುಟ್ಟರಾಜು, ಮುಖಂಡರಾದ ರವಿಕುಮಾರ್, ಸುದರ್ಶನ್ ಬಾಬು, ಪವನಕುಮಾರ್, ಉಮೇಶ್, ಸತೀಶ್ ಮತ್ತಿತರರಿದ್ದರು.

## ವಸತಿ ಶಾಲೆ ವಿದ್ಯಾರ್ಥಿನಿ ಅನುಮಾನಾಸ್ಪದ ಸಾವು

ಹಾಸನ: ಸೋಮವಾರ ಪೇಟೆ ತಾಲ್ಲೂಕು ಕ್ಯಾತೆ ಗ್ರಾಮದ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಯ ವಿದ್ಯಾರ್ಥಿನಿ ಅನುಮಾನಾಸ್ಪದ ಸಾವಿಗೀಡಾಗಿದ್ದಾಳೆ.

ಕೊಡಗು ಜಿಲ್ಲೆ ದೊಡ್ಡಭಂಡಾರ ಗ್ರಾಮದ ಶಿವ ಹಾಗೂ ಆಶಾ ದಂಪತಿ ಪುತ್ರಿ ಪೂರ್ವಿಕಾ (13) ಮೃತಳು. ಏಳನೇ ತರಗತಿಯಲ್ಲಿ ಓದುತ್ತಿದ್ದ ವಿದ್ಯಾರ್ಥಿನಿ ಬುಧವಾರ ಹಾಸ್ಟೆಲ್‌ನಲ್ಲಿದ್ದಾಗ ಸುಸ್ತು ಎಂದು ಕುಸಿದು ಬಿದ್ದಿದ್ದಳು. ಕೊಡ್ಲಿಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹಾಸನದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾಳೆ. ಬಾಲಕಿಯ ಸಾವಿನ ಕುರಿತು ಅನುಮಾನ ವ್ಯಕ್ತವಾಗಿದೆ. ಮರಣೋತ್ತರ ಪರೀಕ್ಷೆಗಾಗಿ ಶವವನ್ನು ಹಿಮ್ಸ್‌ಗೆ ರವಾನಿಸಲಾಗಿದೆ.

## ಗೂಡ್ಸ್ ವಾಹನ ಡಿಕ್ಕಿ: ಯುವಕನಿಗೆ ಗಾಯ

ಸಕಲೇಶಪುರ: ತಾಲ್ಲೂಕಿನ ಗುಲಗಳಲೆ ಸಮೀಪ ಗುರುವಾರ ಗೂಡ್ಸ್ ವಾಹನ ಡಿಕ್ಕಿಯಾಗಿ ಯುವಕ ಗಂಭೀರ ಗಾಯಗೊಂಡಿದ್ದಾನೆ.

ತಾಲ್ಲೂಕಿನ ಕೆಂದನಮನೆ ಗ್ರಾಮದ ಅವಿನಾಶ್ (25) ಗಾಯಾಳು. ಹಾಸನದಿಂದ ಸಕಲೇಶಪುರಕ್ಕೆ ಸಿಮೆಂಟ್ ತುಂಬಿಕೊಂಡು ತೆರಳುತ್ತಿದ್ದ ವಾಹನ ಚಾಲಕನ ನಿಯಂತ್ರಣ ತಪ್ಪಿ ಬೈಕ್‌ನಲ್ಲಿ ರಸ್ತೆ ಬದಿ ನಿಂತಿದ್ದ ಅವಿನಾಶ್ ಮೇಲೆ ಹರಿದಿದೆ. ನಂತರ ವಾಹನ ಡಿವೈಡರ್‌ಗೆ ಡಿಕ್ಕಿಯಾಗಿ ಅಂಗಡಿಗೆ ಗುದ್ದಿದೆ. ಗಾಯಾಳು ಅವಿನಾಶ್‌ಗೆ ಹಾಸನದ ಹಿಮ್ಸ್‌ನಲ್ಲಿ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿಗೆ ಕರೆದೊಯ್ಯಲಾಗಿದೆ. ನಗರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

## ಅನುದಾನ ಹಂಚಿಕೆಯಲ್ಲಿ ತಾರತಮ್ಯ ಪಪಂ ಸದಸ್ಯರ ಪ್ರತಿಭಟನೆ



■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಅರಕಲಗೂಡು: 15ನೇ ಹಣಕಾಸು ಯೋಜನೆ ಅನುದಾಡಿ ಕಾಮಗಾರಿಗಳನ್ನು ಕೆಲವೇ ಸದಸ್ಯರ ವಾರ್ಡ್‌ಗೆ ಮೀಸಲಿಡಲಾಗಿದೆ ಎಂದು ಆರೋಪಿಸಿ ಪಟ್ಟಣ ಪಂಚಾಯಿತಿ ಸದಸ್ಯರು ಸಾಮಾನ್ಯ ಸಭೆ ಬಹಿಷ್ಕರಿಸಿ ಪ್ರತಿಭಟನೆ ನಡೆಸಿದರು.

ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಅಧ್ಯಕ್ಷ ಪ್ರದೀಪ್ ಕುಮಾರ್ ಅಧ್ಯಕ್ಷತೆಯಲ್ಲಿ ಸಾಮಾನ್ಯಸಭೆ ಕರೆಯಲಾಗಿತ್ತು. ಸದಸ್ಯರಾದ ರಮೇಶ್ ವಾಟಾಳ್, ರಶ್ಮಿ, ನಿಖಿಲ್‌ಕುಮಾರ್ ಮತ್ತು ಲಕ್ಷ್ಮೀ ಅವರು ಸಭೆ ಆರಂಭದಲ್ಲೇ ಈ ಕುರಿತು ವಾಗ್ವಾದ ನಡೆಸಿದರು.

ಪಪಂ ವ್ಯಾಪ್ತಿಯಲ್ಲಿ 17 ವಾರ್ಡ್‌ಗಳಿದ್ದು, 15ನೇ ಹಣಕಾಸು ಯೋಜನೆಯ ಅನುದಾನ ಸೇರಿದಂತೆ ಇತರೆ ಸರ್ಕಾರಿ ಅನುದಾನವನ್ನು ಸೀಮಿತ ವಾರ್ಡ್‌ಗಳ ಅಭಿವೃದ್ಧಿಗೆ ಬಳಕೆ ಮಾಡಲಾಗುತ್ತಿದ. ಅಲ್ಲದೆ ಈ ಹಿಂದೆ ನಿಗದಿ ಮಾಡಿರುವ ಕಾಮಗಾರಿಗೆ ಪುನಃ ಹಣ ನಿಗದಿ ಮಾಡಿರುವುದು ಸಹ ಕಂಡುಬಂದಿದೆ. ಅಲ್ಲದೆ ಕೆಲವು ಕಾಮಗಾರಿ ವಿಷಯ ಹಿಂದಿನ ಸಭೆಯಲ್ಲಿ ಪ್ರಸ್ತಾಪವಾಗದಿದ್ದರೂ ಕೂಡ ಆ ಕಾಮಗಾರಿಗೆ ಅನುಮೋದನೆ ಸಿಕ್ಕಿದೆ ಎಂದು ನಡಾವಳಿ ಪುಸ್ತಕದಲ್ಲಿ ದಾಖಲಿಸಿ ಓದಿ ರೇಕಾರ್ಡ್ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ನನ್ನ ಅವಧಿಯಲ್ಲಿ ಯಾವುದೇ ಅಕ್ರಮ ನಡೆಯಲು ಬಿಟ್ಟಿಲ್ಲ. ಸುಖಾ ಸುಮ್ಮನೆ ಆರೋಪ ಮಾಡಬೇಡಿ. ಅನುದಾನ ಹಂಚಿಕೆ ಮತ್ತು ಕಾಮಗಾರಿ ಟೆಂಡರ್ ಬಗ್ಗೆ ಎಂಜಿನಿಯರ್ ಜಗದೀಶ್ ಅವರಿಂದ ಮಾಹಿತಿ ಪಡೆದುಕೊಳ್ಳಬಹುದಾಗಿದೆ ಎಂದು ಅಧ್ಯಕ್ಷ ಪ್ರದೀಪ್‌ಕುಮಾರ್ ಉತ್ತರಿಸಿದರು. ಅದಕ್ಕೆ ಸುಮ್ಮನಾಗದ ವಿರೋಧ ಪಕ್ಷದ ಸದಸ್ಯರು ಪಪಂ ಆಡಳಿತದ ತಾರತಮ್ಯ ವಿರೋಧಿ ಧೋರಣೆಯನ್ನು ಖಂಡಿಸಿ ಸಭೆಯನ್ನು ಬಹಿಷ್ಕರಿಸಿ ಹೊರ ನಡೆದರು.

ಸಭೆಯಲ್ಲಿ ಕೋರಂ ಇರುವ ಕಾರಣ ಸಭೆಯನ್ನು ಮುಂದುವರಿಸಿ ಎಂದು ಅಧ್ಯಕ್ಷ ಪ್ರದೀಪ್‌ಕುಮಾರ್ ಅವರು ಸೂಚನೆ ಮೇರೆಗೆ ಸಭೆ ಮುಂದುವರಿದು ಕೆಲವು ಕಾಮಗಾರಿಗಳಿಗೆ ಅನುಮೋದನೆ ದೊರೆಯಿತು.

## ಬಿಜಿಎಸ್ ಮಠದಲ್ಲಿ ಹುಣ್ಣಿಮೆ ಕಾರ್ಯಕ್ರಮ

ಹಾಸನ: ನಗರದ ಶ್ರೀ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಮಾ. 14ರ ಸಂಜೆ 5.30ಕ್ಕೆ ಗುರು ತೋರಿದ ದಾರಿ ತಿಂಗಳ ಮಾಮನ ತೇರು 126ನೇ ಹುಣ್ಣಿಮೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಸಾನಿಧ್ಯ ವಹಿಸುವರು. ಬಾಗಲಕೋಟೆ ಜಿಲ್ಲೆಯ ಅನವಾಲದ ಪೂರ್ಣಾನಂದ ಆಶ್ರಮದ ಶ್ರೀ ಕೈಲಾಸನಂದನಾಥ ಸ್ವಾಮೀಜಿ ಗುರು ಮಹಿಮೆ ವಿಷಯ ಕುರಿತು ಉಪನ್ಯಾಸ ನೀಡಲಿದ್ದಾರೆ.

## ಫೋಟೊ ವಿಚಾರಕ್ಕೆ ಹೊಡೆದಾಟ: ಮೂವರ ಬಂಧನ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್



ಹಾಸನ: ಹೋಳಿ ಹಬ್ಬದ ಸಂಭ್ರಮಾಚರಣೆಯಲ್ಲಿ ಫೋಟೊ ತೆಗೆಯುವ ವಿಚಾರಕ್ಕೆ ಸಂಬಂಧಿಸಿ ಯುವಕನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದ ಮೂವರನ್ನು ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ಮಾ. 8 ರಂದು ಗಲಾಟೆ ನಡೆದಿತ್ತು. ಚಿಕ್ಕಹೊನ್ನೇನ ಹಳ್ಳಿಯ ಲೋಹಿತ್, ಋತ್ವಿಕ್ ಹಾಗೂ ಆಕಾಶ್ ಬಂಧಿತರು. ಶಂಕರಿಪುರಂನ ಪಿ. ಚಂದನ್ ಹಾಗೂ ಪ್ರಜ್ವಲ್ ಮೇಲೆ ಹಲ್ಲೆ ನಡೆಸಿದ್ದರು.

ಘಟನೆ ಹಿನ್ನೆಲೆ: ಬಿಎಸ್ಎಸ್ ಮೈಕ್ರೋ ಫೈನಾನ್ಸ್‌ನಲ್ಲಿ ಕೆಲಸ ಮಾಡಿಕೊಂಡಿರುವ ಪಿ. ಚಂದನ್ ಮಾ. 8ರಂದು ಬಿ.ಎಂ. ರಸ್ತೆಯ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ್ದ ಹೋಳಿ ಇವೆಂಟ್‌ನಲ್ಲಿ ಸ್ನೇಹಿತ ಪ್ರಜ್ವಲ್ ಜೊತೆಗೆ ಭಾಗಿಯಾಗಿದ್ದ. ಈ ವೇಳೆ ಫೋಟೊ ತೆಗೆಯುವ ವಿಚಾರವಾಗಿ ಪ್ರಜ್ವಲ್ ಹಾಗೂ ಲೋಹಿತ್ ನಡುವೆ ಗಲಾಟೆ ನಡೆದಿತ್ತು. ಮೂವರು ಒಟ್ಟಾಗಿ ಪ್ರಜ್ವಲ್‌ನನ್ನು ಹಿಗ್ಗಾಮುಗ್ಗಾ ಥಳಿಸಿದ್ದರು. ಚಂದನ್ ಎಲ್ಲರನ್ನೂ ಸಮಾಧಾನಪಡಿಸಿದ್ದ. ಗಂಭೀರ ಗಾಯಗೊಂಡಿದ್ದ ಪ್ರಜ್ವಲ್‌ನ ಆರೋಗ್ಯ ವಿಚಾರಣೆಗೆ ಚಂದನ್ ಹಿಮ್ಸ್‌ಗೆ ಬಂದಿದ್ದ. ಚಂದನ್‌ನನ್ನು ಹೊಡೆಯುವ ಉದ್ದೇಶದಿಂದ ಅಲ್ಲಿಗೆ ಬಂದ ಮೂವರು ಇಲ್ಲಿಗೆ ಯಾಕೆ ಬಂದಿದ್ದೀಯ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ಅರೆ ಬೆತ್ತಲೆಗೊಳಿಸಿ, ಕಾಲಿನಿಂದ ಒದ್ದು ಗಾಯಗೊಳಿಸಿದ್ದರು. ಬೈಕ್ ಕೀ ನೆರವಿನಿಂದ ಎದೆ ಭಾಗಕ್ಕೆ ಬಲವಾಗಿ ಇರಿದಿದ್ದಾರೆ. ಚಂದನ್ ಬಿಟ್ಟುಬಿಡಿ ಎಂದು ಕೈ ಮುಗಿದು ಪ್ರಾರ್ಥಿಸಿದರೂ ಬಿಡದೆ ರೌದ್ರವತಾರ ಮೆರೆದಿದ್ದರು. ಗಂಭೀರ ಗಾಯಗೊಂಡಿರುವ ಚಂದನ್ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಪ್ರಕರಣ ದಾಖಲಿಸಿಕೊಂಡಿದ್ದ ನಗರ ಠಾಣೆ ಪೊಲೀಸರು ಮೂವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

## ಮಾ. 17ಕ್ಕೆ ಡಾ. ಪುನೀತ್ ಜನ್ಮ ದಿನಾಚರಣೆ




■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ್ ಅವರ 50ನೇ ಹುಟ್ಟುಹಬ್ಬದ ಅಂಗವಾಗಿ ಕಾಂಗ್ರೆಸ್ ಮುಖಂಡ ಡಿ.ಪಿ. ಚಂದ್ರಶೇಖರ್ ಅಭಿಮಾನಿಗಳ ಸಂಘದಿಂದ ಮಾ. 17 ರಂದು ಸಾಲಗಾಮೆ ಗ್ರಾಮದಲ್ಲಿ ಪುನೀತೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಮುಖಂಡ ಪ್ರದೀಪ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಅಂದು ಬೆಳಗ್ಗೆ 10.30 ಪುನೀತ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ, 11.30ರ ನಂತರ ರಕ್ತದಾನ ಶಿಬಿರ, ಆರೋಗ್ಯ ಉಚಿತ ತಪಾಸಣಾ ಶಿಬಿರ ನಡೆಯಲಿದೆ. ಸಂಜೆ 6 ಗಂಟೆಗೆ ವೇದಿಕೆ ಕಾರ್ಯಕ್ರಮ ಹಾಗೂ ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ ಹಮ್ಮಿಕೊಳ್ಳಲಾಗಿದೆ ಎಂದರು.

ಸಾಲಗಾಮೆ ಸುತ್ತಲಿನ ಜನರು ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಸಂತೋಷ್, ದರ್ಶನ್, ದಿನೇಶ್, ಕೆ.ಪಿ. ಭರತ್, ಅಭಿಲಾಷ್ ಇದ್ದರು.

## ರಾಗಿ ಖರೀದಿ ಕೇಂದ್ರ ಆರಂಭ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಅರಕಲಗೂಡು: ತಾಲ್ಲೂಕಿನ ರಾಮನಾಥಪುರದಲ್ಲಿ ಗುರುವಾರ ರಾಗಿ ಖರೀದಿ ಕೇಂದ್ರ ಆರಂಭಿಸಲಾಯಿತು.

ಕೇಂದ್ರದ ಅಧಿಕಾರಿ ಚಂದ್ರಶೇಖರ್ ಮಾತನಾಡಿ, ಇಲ್ಲಿವರೆಗೆ 2,223 ರೈತರು ನೋಂದಣಿ ಮಾಡಿಕೊಂಡಿದ್ದಾರೆ. 34,700 ಕ್ವಿಂಟಾಲ್ ರಾಗಿ ಖರೀದಿಗೆ ಅನುಮತಿ ಸಿಕ್ಕಿದೆ. ಕ್ರಮ ಸಂಖ್ಯೆ ಆಧಾರದ ಮೇಲೆ ರಾಗಿ ಶುದ್ಧೀಕರಣಗೊಳಿಸಿ ಮಾರಾಟಕ್ಕೆ ತರಬೇಕೆಂದು ರೈತರಿಗೆ ನಿರ್ದೇಶನ ನೀಡಲಾಗಿದೆ ಎಂದರು.



ರೈತರು ಯಾವುದೇ ಗೊಂದಲಕ್ಕೆ ಒಳಗಾಗದೆ ಪದಾರ್ಥವನ್ನು ಖರೀದಿ ಕೇಂದ್ರಕ್ಕೆ ತರಬೇಕು. ಒಂದು ಪಹಣಿಗೆ 20 ಕ್ವಿಂಟಾಲ್ ರಾಗಿ ಖರೀದಿಗೆ ಅವಕಾಶವಿದೆ. ಬಿಸಿಲಿನ ಕಾರಣಕ್ಕೆ ಶಾಮಿಯಾನ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

## ಡೀಸೆಲ್ ಖಾಲಿಯಾಗಿ ಸಿಕ್ಕಿತು ಕದ್ದ ಟ್ರ್ಯಾಕ್ಟರ್

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್



ಅರಕಲಗೂಡು: ನಕಲಿ ಕೀ ಬಳಸಿ ರಾತ್ರೋ ರಾತ್ರಿ ಗ್ರಾಮ ಪಂಚಾ ಯಿತಿ ಆವರಣದಲ್ಲಿ ನಿಲ್ಲಿಸಿದ್ದ ಟ್ರ್ಯಾಕ್ಟರ್ ಕದ್ದಿದ್ದ ಕಳ್ಳ ಡೀಸೆಲ್ ಖಾಲಿಯಾಗಿದ್ದರಿಂದ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾನೆ.

ಕೆ.ಆರ್. ನಗರ ತಾಲ್ಲೂಕು ಕೆಸ್ತೂರು ಕೊಪ್ಪಲು ಗ್ರಾಮದ ಅವಿನಾಶ್ ಬಂಧಿತ ಆರೋಪಿ. ತಾಲ್ಲೂಕಿನ ಕೊಣನೂರು ಗ್ರಾಮ ಪಂಚಾಯಿತಿಗೆ ಸೇರಿದ ಟ್ರ್ಯಾಕ್ಟರ್ ಅನ್ನು ಮಾ. 9ರ ರಾತ್ರಿ ಕಳ್ಳತನ ಮಾಡಿಕೊಂಡು ಹೋಗಿದ್ದ. ಕಸ ತುಂಬುವ ಟ್ರ್ಯಾಕ್ಟರ್ ನಾಪತ್ತೆಯಾಗಿರುವ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕೊಣನೂರು ಠಾಣೆಗೆ ದೂರು ನೀಡಿದ್ದರು.

ಅವಿನಾಶ್ ವಿರುದ್ಧ ವಿರುದ್ಧ ಚಾಮರಾಜನಗರ, ಬನ್ನೂರು, ಹಾಸನ ಠಾಣೆಯಲ್ಲಿ ಕಳವು ಪ್ರಕರಣ ದಾಖಲಾಗಿದೆ. ಮಾ. 9ರ ರಾತ್ರಿ ಕೊಣನೂರಿಗೆ ಬಂದಿದ್ದ ಈತ ಗ್ರಾಮ ಪಂಚಾಯಿತಿ ಆವರಣ ದಲ್ಲಿ ಟ್ರ್ಯಾಕ್ಟರ್ ನಿಂತಿರುವುದನ್ನು ಕಂಡು ನಕಲಿ ಕೀ ಬಳಸಿ ಕಳವಿಗೆ ಯತ್ನಿಸಿದ್ದ. ಹಗಲು ವೇಳೆ ಕಾರ್ಯ ಸಾಧನೆಗೆ ಮುಂದಾದರೆ ತೊಂದರೆಯಾಗುತ್ತದೆ ಎಂದು ರಾತ್ರಿ ಯಾರೂ ಇಲ್ಲದ ವೇಳೆ ಟ್ರ್ಯಾಕ್ಟರ್ ಓಡಿಸಿಕೊಂಡು ಹೋಗಿದ್ದ. ಕಡುವಿನಹೊಸಹಳ್ಳಿಯ ಮಾವಿನ ತೋಪಿನ ಬಳಿ ಡೀಸೆಲ್ ಖಾಲಿಯಾಗಿ ಅಲ್ಲಿಯೇ ನಿಲ್ಲಿಸಿಕೊಂಡಿದ್ದ. ಮಾವಿನ ತೋಪಿನ ಸಮೀಪ ಟ್ರ್ಯಾಕ್ಟರ್ ನಿಲ್ಲಿಸಿ ದಾರಿಹೋಕರ ಮೊಬೈಲ್ ಪಡೆದು ಯಾರಿಗೋ ಕರೆ ಮಾಡುತ್ತಿದ್ದ. ಈತನ ಮೇಲೆ ಸಂಶಯ ಬಂದ ವ್ಯಕ್ತಿಯೊಬ್ಬರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಟ್ರ್ಯಾಕ್ಟರ್ ಸಮೇತ ಆತನನ್ನು ವಶಕ್ಕೆ ಪಡೆದಿದ್ದಾರೆ.

## ಬೈಕ್ ಮೇಲಿಂದ ಬಿದ್ದು ಸವಾರ ಸಾವು

ಹಾಸನ: ನಗರದ ಸತ್ಯಮಂಗಲ ದಲ್ಲಿ ನಿಯಂತ್ರಣ ತಪ್ಪಿ ಬೈಕ್ ಮೇಲಿಂದ ಬಿದ್ದು ಯುವಕ ಮೃತಪಟ್ಟಿದ್ದಾನೆ. ಚೇತನ್ (26) ಮೃತ ಯುವಕ. ಪೇಟಿಂಗ್ ಕೆಲಸ ಮಾಡಿಕೊಂಡಿದ್ದ ಈತ ಬುಧವಾರ ಮಧ್ಯಾಹ್ನ ಕೆಲಸ ಮುಗಿಸಿ ಮನೆಗೆ ವಾಪಾಸ್ಸಾಗುತ್ತಿದ್ದಾಗ ನಿಯಂತ್ರಣ ತಪ್ಪಿ ಕೆಳಗೆ ಬಿದ್ದಿದ್ದಾನೆ. ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಮೃತಪಟ್ಟಿದ್ದಾನೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೈಕ್ ಸವಾರ ಸಾವು

ಹಾಸನ: ತಾಲ್ಲೂಕಿನ ಸಾಲಗಾಮೆ ಸಮೀಪ ಕಾರು ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿದ್ದಾನೆ. ತಾಲ್ಲೂಕಿನ ಆಲದಹಳ್ಳಿ ಗ್ರಾಮದ ಶಿವಕುಮಾರ್ ಮೃತರು. ಬಾರ್ ಬೆಂಡಿಂಗ್ ಕೆಲಸ ಮಾಡಿಕೊಂಡಿದ್ದ ಅವರು ಬೈಕ್‌ನಲ್ಲಿ ಬರುತ್ತಿದ್ದಾಗ ಎದುರು ಗಡೆಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ. ಚಿಕಿತ್ಸೆಗೆ ಸ್ಪಂದಿಸದೆ ಮೃತಪಟ್ಟಿದ್ದಾರೆ. ಗ್ರಾಮಾಂತರ ಠಾಣೆ ಯಲ್ಲಿ ಪ್ರಕರಣ ದಾಖಲಾಗಿದೆ.



ಹಾಸನ: ರಾಜ್ಯ ಸರ್ಕಾರಿ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾಗಿ ಸಿ.ಕೆ. ರಘು ಅವಿರೋಧ ಆಯ್ಕೆಯಾದರು. ಉಪಾಧ್ಯಕ್ಷರಾಗಿ ಕೆ.ಸಿ. ರವೀಂದ್ರ ಪ್ರಕಾಶ್, ಪ್ರಧಾನ ಕಾರ್ಯದರ್ಶಿಯಾಗಿ ಹೆಚ್.ಆರ್. ಪಾಲಾಕ್ಷ, ಖಜಾಂಚಿಯಾಗಿ ಡಿ.ಇ. ರೂಪ, ಜಂಟಿ ಕಾರ್ಯದರ್ಶಿಯಾಗಿ ರಾಜೇಶ್ವರಿ, ಸಂಘಟನಾ ಕಾರ್ಯದರ್ಶಿಯಾಗಿ ಸಿ.ಆರ್. ಮಧು ಆಯ್ಕೆಯಾಗಿದ್ದಾರೆ. ಚುನಾವಣಾಧಿಕಾರಿಯಾಗಿ ಮಹದೇವ ಕಾರ್ಯನಿರ್ವಹಿಸಿದರು.



ಚನ್ನರಾಯಪಟ್ಟಣ: ತಾಲ್ಲೂಕಿನ ವಳಗೇರಹಳ್ಳಿ ಗ್ರಾಮದಲ್ಲಿ ಶ್ರೀ ಬೀರಲಿಂಗೇಶ್ವರ ಧಾರ್ಮಿಕ ಮತ್ತು ವಿದ್ಯಾಭಿವೃದ್ಧಿ ಸಂಘದಿಂದ ನಿರ್ಮಾಣವಾಗಿರುತ್ತಿರುವ ಸಮುದಾಯ ಭವನಕ್ಕೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಶ್ರವಣಬೆಳಗೊಳ ಯೋಜನಾ ಕಚೇರಿಯಿಂದ 2 ಲಕ್ಷ ರೂ. ದೇಣಿಗೆಯನ್ನು ಯೋಜನಾಧಿಕಾರಿ ಸದಾಶಿವ್ ಕುಲಾಲ್ ಸಂಘದ ಸದಸ್ಯರಿಗೆ ಗುರುವಾರ ಹಸ್ತಾಂತರಿಸಿದರು. ತಾಲ್ಲೂಕು ಅರ್ಚಕರ ಸಂಘದ ಅಧ್ಯಕ್ಷ ಶ್ರೀಧರ್ ಮೂರ್ತಿ, ಬಾಗೂರು ವಲಯ ಮೇಲ್ವಿಚಾರಕಿ ವೀಣಾ ಇತರರಿದ್ದರು.

## ಅಂಬೇಡ್ಕರ್ ಭವನದಲ್ಲಿ ಸಮಾವೇಶ ನಾಳೆ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್




ಹಾಸನ: ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಮಾ. 15 ರಂದು ರಾಜ್ಯ ಅಸಂಘಟಿತ ಕಾರ್ಮಿಕರ ಸಂಘದ ರಾಜ್ಯ ಮತ್ತು ಜಿಲ್ಲಾ ಸಮಿತಿ ವತಿಯಿಂದ ರಾಜ್ಯ ಮಟ್ಟದ ಪದಾಧಿಕಾರಿಗಳ ಸಮಾವೇಶ ಏರ್ಪಡಿಸಲಾಗಿದೆ ಎಂದು ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷ ಕುಪೇಂದ್ರ ಆಯನೂರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಕಾರ್ಮಿಕ ಸಚಿವ ಸಂತೋಷ್ ಲಾಡ್ ಭಾಗವಹಿಸುವರು. ಕಾರ್ಮಿಕ ಕಾರ್ಡ್ ವಿತರಣೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಸಂಘದ ರಾಜ್ಯಾಧ್ಯಕ್ಷ ಪ್ರದೀಪ್ ಹೊನ್ನಪ್ಪ ವಹಿಸಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಸಂಸದ ಶ್ರೇಯಸ್ ಪಟೇಲ್, ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಹಾಗೂ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು, ಶಿವಮೊಗ್ಗ ಎಂಎಲ್‌ಸಿ ಡಿ.ಎಸ್.ಅರುಣ್ ಕುಮಾರ್, ಸಂಘದ ಜಿಲ್ಲಾಧ್ಯಕ್ಷ ಎಸ್.ಎಸ್.ರಂಗಸ್ವಾಮಿ, ಶಿವಮೊಗ್ಗ ಜಿಲ್ಲಾ ಕೈಗಾರಿಕಾ ಶಿಕ್ಷಣ ಮತ್ತು ತರಬೇತಿ ಕೇಂದ್ರದ ಅಧ್ಯಕ್ಷ ಹರ್ಷ ಭಾಸ್ಕರ್ ಕಾಮತ್, ಮಹೇಶ್ ಪೇಟ್ಕರ್ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಸಮಾರೋಪ ಸಮಾರಂಭದಲ್ಲಿ ಮಾಜಿ ಸಂಸದ ಹಾಗೂ ಅಸಂಘಟಿತ ಕಾರ್ಮಿಕರ ಸಂಘದ ಗೌರವಾಧ್ಯಕ್ಷ ಆಯನೂರು ಮಂಜುನಾಥ್, ಕಾರ್ಯಾಧ್ಯಕ್ಷೆ ರತ್ನಮಾಲ ಸುರೇಶ್ ಮೂಳೆ ಭಾಗವಹಿಸುವರು ಎಂದರು.

ನಗರಸಭೆ ಅಧ್ಯಕ್ಷ ಎಂ. ಚಂದ್ರೇಗೌಡ, ಸಂಘದ ಹಾಸನ ನಗರಾಧ್ಯಕ್ಷ ಟಿ.ಮಹೇಶ್, ಗ್ರಾಮಾಂತರ ಅಧ್ಯಕ್ಷ ವೆಂಕಟೇಶ್, ಜಿಲ್ಲಾ ಉಪಾಧ್ಯಕ್ಷ ಸಗೀರ್ ಅಹಮದ್, ಮುಖ್ಯ ಅತಿಥಿಗಳಾಗಿ ಹಾಸನ ವಿಭಾಗ ಸಹಾಯಕ ಕಾರ್ಮಿಕ ಆಯುಕ್ತೆ ಯಮುನಾ ಉಪಸ್ಥಿತರಿರಲಿದ್ದಾರೆ.

ಜಿಲ್ಲೆಯ ಎಲ್ಲ ಕಾರ್ಮಿಕ ಬಂಧುಗಳು ಸಮಾವೇಶದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಸಂಘದ ರಾಜ್ಯಾಧ್ಯಕ್ಷ ಪ್ರದೀಪ್ ಹೊನ್ನಪ್ಪ, ಜಿಲ್ಲಾ ಉಸ್ತುವಾರಿ ಮಹೇಶ್ ಪೇಟ್ಕರ್, ಜಿಲ್ಲಾಧ್ಯಕ್ಷ ಎಸ್.ಎಸ್.ರಂಗಸ್ವಾಮಿ, ಉಪಾಧ್ಯಕ್ಷ ಸಗೀರ್ ಅಹಮದ್, ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್ ಇದ್ದರು.

CMYK CMYK CMYK CMYK

# ಸಮಾನತೆ ಹರಿಕಾರ ರೇಣುಕಾಚಾರ್ಯ

## ತತ್ವ ಸಿದ್ಧಾಂತಗಳನ್ನು ಎಲ್ಲರೂ ಅಳವಡಿಸಿಕೊಳ್ಳಿ: ಚನ್ನಸಿದ್ದೇಶ್ವರ ಸ್ವಾಮೀಜಿ ಸಲಹೆ

ಹಾಸನ: ಸ್ವಾತಂತ್ರ್ಯಪೂರ್ವದಲ್ಲೇ ಮನುಕುಲದ ಉದ್ಧಾರಕ್ಕಾಗಿ ಸಮಾನತೆಯ ಹರಿಕಾರರಾಗಿ ಬಂದಂತಹ ರೇಣುಕಾಚಾರ್ಯರ ತತ್ವ ಸಿದ್ಧಾಂತಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಯಳಸೂರಿನ ತೆಂಕಲಗೋಡು ಬೃಹನ್ಮಠದ ಪೀಠಾಧ್ಯಕ್ಷ ಶ್ರೀ ಚನ್ನಸಿದ್ದೇಶ್ವರ ಸ್ವಾಮೀಜಿ ಸಲಹೆ ನೀಡಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಾಸನಾಂಬ ಕಲಾಕ್ಷೇತ್ರದಲ್ಲಿ ಬುಧವಾರ ಆಯೋಜಿಸಿದ್ದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, ಅಗಸ್ತ್ಯ ಮಹರ್ಷಿಗಳ ಗೊಂದಲಗಳ ನಿವಾರಣೆ ಮಾಡಲು ರೇಣುಕಾಚಾರ್ಯರು ನೀಡಿದ ಉಪನ್ಯಾಸ, ಶ್ಲೋಕಗಳು ಸಿದ್ಧಾರ್ಥ ಶಿಖಾಮಣಿ ಪುಸ್ತಕವಾಗಿದೆ. ಬಸವಣ್ಣನವರು ಕೂಡಾ ರೇಣುಕಾಚಾರ್ಯರು ಹಾಕಿದ ಮಾರ್ಗದಲ್ಲೇ ಬಂದವರಾಗಿದ್ದಾರೆ ಎಂದರು.

ಯಾರು ಸಮಾಜಕ್ಕಾಗಿ ನಿಸ್ವಾರ್ಥ ಸೇವೆ ಮಾಡುತ್ತಾರೋ, ಸಮಾಜದ ಉದ್ಧಾರಕ್ಕಾಗಿ ಹಗಲಿರುಳು ಶ್ರಮಿಸುತ್ತಾರೆ. ಅಂತವರ ಜನ್ಮದಿನ ಆಚರಿಸಲಾಗುತ್ತದೆ. ಅಂತಹ ಮಹನೀಯರಲ್ಲಿ ರೇಣುಕಾಚಾರ್ಯರು ಒಬ್ಬರು ಎಂದು ತಿಳಿಸಿದರು.



ತಣ್ಣೀರುಹಳ್ಳ ಮಠದ ಮಠಾಧೀಶ ವಿಜಯಕುಮಾರ್ ಸ್ವಾಮೀಜಿ ಮಾತನಾಡಿ, ಧರ್ಮ ರಕ್ಷಣೆಗಾಗಿ ಅವತರಿಸಿ ಶಿವ ಜ್ಞಾನದ ಬೆಳಕನ್ನು ಬೀರುವ ಮೂಲಕ ಕರ್ಮವನ್ನು ಕಳೆದು ಧರ್ಮವನ್ನು ಬಿತ್ತಿ ಬದುಕನ್ನು ಬಂಗಾರ ಮಾಡಿದ ಕೀರ್ತಿ ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಅವರು ಸಂಸ್ಕಾರ ಸಂಸ್ಕೃತಿಯನ್ನು ಅರುಹಿದ ಯುಗ ಪುರುಷರಾಗಿದ್ದಾರೆ ಎಂದರು.

ಪುರುಷರಂತೆ ಮಹಿಳೆಯರಿಗೂ ಕೂಡ ಧಾರ್ಮಿಕ ಸ್ವಾತಂತ್ರ್ಯ ತಂದು ಕೊಟ್ಟವರಲ್ಲಿ ರೇಣುಕಾಚಾರ್ಯರು ಪ್ರಥಮರು. ಕಾಯಕ ಮತ್ತು ದಾಸೋಹ ಭಾವನೆಯ ಮೂಲಕ ಕ್ರಿಯಾತ್ಮಕ ಬದುಕಿಗೆ ಕರೆಕೊಟ್ಟವರಾಗಿದ್ದಾರೆ. ಲೋಕ ಕಲ್ಯಾಣ ಹಾಗೂ ವಿಶ್ವ ಶಾಂತಿಗಾಗಿ ಸದಾ ಕಾಲ ಶ್ರಮಿಸಿದವರಾಗಿದ್ದಾರೆ. ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆಯೋಣ ಎಂದು ಹೇಳಿದರು.

ಪೊಲೀಸ್ ಉಪ ಅಧೀಕ್ಷಕ ಪಿ.ಕೆ. ಮುರಳೀಧರ್ ಮಾತನಾಡಿ, ಇಂತಹ ಮಹನೀ ಯರ ಜಯಂತಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಗ್ರೇಡ್-2 ತಹಶೀಲ್ದಾರ್ ಹುಲಿವಾಲ ಮೋಹನ್ ಕುಮಾರ್ ಅಧ್ಯಕ್ಷತೆ ವಹಿಸಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಚ್.ಪಿ. ತಾರಾನಾಥ್, ಜಿಲ್ಲಾಧಿಕಾರಿ ಕಚೇರಿ ತಹಶೀಲ್ದಾರ್ ಎಲ್. ಎಸ್. ರಮೇಶ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಬಿ.ಪಿ. ಕೃಷ್ಣೇಗೌಡ, ಗೌವಾಧ್ಯಕ್ಷ ಈ. ಕೃಷ್ಣೇಗೌಡ ಇತರರಿದ್ದರು. ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಶ್ರೀ ರೇಣುಕಾಚಾರ್ಯ ಜಯಂತಿಯ ಮೆರವಣಿಗೆಗೆ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಚಾಲನೆ ನೀಡಿದರು.

# ಬಜೆಟ್ ಪ್ರತಿ ಅವರೇ ಓದಿ ಅರ್ಥೈಸಲಿ

## ಸಂಸದರಿಗೆ ರೇವಣ್ಣ ತಿರುಗೇಟು | ಮಹಾನಗರ ಪಾಲಿಕೆ ಹಿಂದಿನ ಸರ್ಕಾರದ ಕೊಡುಗೆ

ಹಾಸನ: ರಾಜ್ಯ ಸರ್ಕಾರದ ಬಜೆಟ್ ಪ್ರತಿ ಓದಲಿ ಎಂದು ಸಲಹೆ ನೀಡಿರುವವರು ಜಿಲ್ಲೆಗೆ ಯಾವ ಯಾವ ಕೊಡುಗೆ ನೀಡಲಾಗಿದೆ ಎಂಬುದನ್ನು ಬಹಿರಂಗಪಡಿಸಲಿ ಎಂದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರು ಸಂಸದರಿಗೆ ತಿರುಗೇಟು ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಬಜೆಟ್ ಪ್ರತಿ ಓದಲು ನನಗೆ ಬರುವುದಿಲ್ಲ. ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾಪ ಹಿಂದಿನ ಸರ್ಕಾರದ ಅವಧಿಯಲೇ ಆಗಿತ್ತು. ಈ ಬಜೆಟ್‌ನಲ್ಲಿ ಯಾವುದೇ ರೀತಿಯ ಅನುದಾನ ನೀಡಿಲ್ಲ. ಬಜೆಟ್ ಬುಕ್‌ನಲ್ಲಿ ಹಾಸನ ಜಿಲ್ಲೆಗೆ ಎಷ್ಟು ಅನುದಾನ ನೀಡಿದ್ದಾರೆ ಎಂದು ತಿಳಿಸಲಿ ಎಂದರು.

ಸಾರ್ವಜನಿಕರ ತೆರಿಗೆ ಹಣವನ್ನು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರಿಗೆ ಸಂಬಳದ ರೂಪದಲ್ಲಿ ನೀಡುತ್ತಿದೆ. ಅದಕ್ಕಾಗಿ ವಾರ್ಷಿಕ 16 ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ. ಕಾಂಗ್ರೆಸ್ ಕಾರ್ಯಕರ್ತರಿಗೆ ಹಣ ನೀಡುವುದಾದರೆ ಕಾಂಗ್ರೆಸ್ ನಿಂದಲೇ ನೀಡಲಿ. ಸಾರ್ವಜನಿಕರ ತೆರಿಗೆ ಹಣವನ್ನುಏಕೆ ದುರ್ಬಳಕೆ ಮಾಡಿಕೊಳ್ಳಬೇಕು. ಆನ್‌ಲೈನ್ ಮೂಲಕವೇ ಗ್ಯಾರಂಟಿ ಯೋಜನೆ ನಿರ್ವಹಣೆಯಾಗುತ್ತಿರುವಾಗ ಸಮಿತಿ ಏಕೆ ಬೇಕೆಂದು ಪ್ರಶ್ನಿಸಿದರು.



ಜಿಲ್ಲೆಯಲ್ಲಿ ಕೈಗೊಂಡಿರುವ 63 ಇಲಾಖೆಗಳ ವಿವಿಧ ಕಾಮಗಾರಿಗಳ ಒಟ್ಟು 326 ಕೋಟಿ ರೂ. ಬಿಲ್ ರಾಜ್ಯ ಸರ್ಕಾರ ಬಾಕಿ ಉಳಿಸಿಕೊಂಡಿದೆ. 2024-25ನೇ ಸಾಲಿನ ಆರ್ಥಿಕ ವರ್ಷದಲ್ಲಿ ಜಿಲ್ಲಾ ಪಂಚಾಯಿತಿಯಿಂದ ವ್ಯಾಪ್ತಿಯಲ್ಲಿ ಕೈಗೊಂಡ ಕಾಮಗಾರಿಗಳ ಬಿಲ್ ಪಾವತಿಗೆ ಅನುಮೋದನೆ ಪಡೆದಿರುವ ಒಟ್ಟು 326 ಕೋಟಿರೂ. ಅನುದಾನ ಬಿಡುಗಡೆ ಮಾಡದೆ ಜಿಲ್ಲಾ ಖಜಾನೆ ಬಂದ್ ಮಾಡಲಾಗಿದೆ. ಜನವರಿ ತಿಂಗಳಿಂದ ಅಧಿಕಾರಿಗಳಿಗೂ ಸಂಬಳ ನೀಡಿಲ್ಲ, ವಾಹನಗಳಿಗೆ ಡಿಸೇಲ್ ಹಾಕಿಸಲು ಹಣ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಜಿಲ್ಲೆಯಲ್ಲಿ ಒಟ್ಟು 2 ಸಾವಿರ ಬಿಲ್‌ಗಳು ಬಾಕಿ ಉಳಿದಿದೆ ಎಂದು ದೂರಿದರು.

ಹಾಸನ ನಗರದಲ್ಲಿ ಒಟ್ಟು 101 ಕೋಟಿ ರೂ. ವೆಚ್ಚದಲ್ಲಿ ಚತುಷ್ಪಥ ರೈಲ್ವೆ ಮೇಲ್ಸೇತುವೆ ಕಾಮಗಾರಿಗೆ ರೈಲ್ವೆ ಇಲಾಖೆಯಿಂದ 34 ಕೋಟಿ ರೂ. ರಾಜ್ಯ ಸರ್ಕಾರದ 67 ಕೋಟಿ ರೂ. ಅನುದಾನದಲ್ಲಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿತ್ತು. ಆದರೆ, ಈ ಹಿಂದೆ ಕಾಂಗ್ರೆಸ್ ಸರ್ಕಾರ ತನ್ನ ಪಾಲಿನ ಅನುದಾನ ನೀಡಲು ಸಾಧ್ಯವಿಲ್ಲ ಎಂದು ಹೇಳಿದ್ದಕ್ಕೆ ದೇವೇಗೌಡರು ಪತ್ರ ಬರೆದು ಒತ್ತಾಯ ಮಾಡಿದ ಕಾರಣದಿಂದ ಇದೀಗ ಬಾಕಿ 18 ಕೋಟಿರೂ. ಅನುದಾನ ಬಿಡುಗಡೆಯಾಗಿದೆ. ಮೇಲ್ಸೇತುವೆ ಅನುದಾನ ತರುವಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಶ್ರಮವಿದೆ. ರಾಜ್ಯ ಬಜೆಟ್‌ಗೂ ಮೊದಲೇ ಕಾಮಗಾರಿಗೆ ಹಣ ನೀಡಿ ಎಂದು ದೇವೇಗೌಡರು ದನಿ ಎತ್ತಿದ್ದರ ಪರಿಣಾಮ ಅನುದಾನ ಬಿಡುಗಡೆಯಾಗಿದೆ ಎಂದು ತಿರುಗೇಟು ನೀಡಿದರು.

# ಈ ತಿಂಗಳ ಪಡಿತರ ಪ್ರಮಾಣ ಬಿಡುಗಡೆ



ಸಕಲೇಶಪುರ: ತಾಲ್ಲೂಕಿನ ಅಂತ್ಯೋದಯ ಮತ್ತು ಬಿಪಿಎಲ್ ಪಡಿತರದಾರರಿಗೆ ಮಾರ್ಚ್ ತಿಂಗಳ ಧಾನ್ಯ ಹಂಚಿಕೆ ಪ್ರಮಾಣವನ್ನು ಸರ್ಕಾರ ಬಿಡುಗಡೆ ಮಾಡಿದೆ ಎಂದು ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಮುರಳಿ ಮೋಹನ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿ, ಸಾರ್ವಜನಿಕ ವಿತರಣಾ ಪದ್ಧತಿಯಡಿ ತಾಲ್ಲೂಕಿನ ಎಲ್ಲಾ ನ್ಯಾಯಬೆಲೆ ಅಂಗಡಿಗಳ ಮೂಲಕ ಪಡಿತರ ಧಾನ್ಯ ವಿತರಣೆಯಾಗಲಿದೆ. ಪಡಿತರ ಚೀಟಿ ಹೊಂದಿರುವ ಕುಟುಂಬಗಳು ತಮ್ಮ ಸದಸ್ಯರ ಸಂಖ್ಯೆಯ ಆಧಾರದಲ್ಲಿ ಕೆಳಕಂಡ ಪ್ರಮಾಣದಲ್ಲಿ ಪಡಿತರ ಪಡೆಯಲು ಅರ್ಹರಾಗಿದ್ದಾರೆ ಎಂದರು.

1 ರಿಂದ 3 ಸದಸ್ಯರಿರುವ ಕುಟುಂಬಕ್ಕೆ 35 ಕೆ.ಜಿ, 4 ಸದಸ್ಯರಿದ್ದರೆ 45 ಕೆ.ಜಿ, 5 ಸದಸ್ಯರಿಗೆ 65 ಕೆ.ಜಿ, 6 ಸದಸ್ಯರಿಗೆ 85 ಕೆ.ಜಿ, 7 ಸದಸ್ಯರಿಗೆ 105 ಕೆ.ಜಿ, 8 ಸದಸ್ಯರಿಗೆ 125 ಕೆ.ಜಿ, 9 ಸದಸ್ಯರಿಗೆ 145 ಕೆ.ಜಿ, 10 ಸದಸ್ಯರಿಗೆ 165 ಕೆ.ಜಿ, 11 ಸದಸ್ಯರಿಗೆ 185 ಕೆ.ಜಿ ಮತ್ತು 12 ಸದಸ್ಯರಿರುವ ಕುಟುಂಬಗಳಿಗೆ 205 ಕೆ.ಜಿ ಪಡಿತರ ಧಾನ್ಯ ವಿತರಿಸಲಾಗುವುದು ಎಂದರು.

ಪಡಿತರ ಚೀಟಿಯ ಪ್ರತಿಯೊಬ್ಬ ಸದಸ್ಯರಿಗೂ 15 ಕೆ.ಜಿ. ಆಹಾರ ಧಾನ್ಯ ಉಚಿತವಾಗಿ ವಿತರಣೆ ಮಾಡಲಾಗುತ್ತದೆ. ಅರ್ಹ ಫಲಾನುಭವಿಗಳು ನಿರ್ದಿಷ್ಟ ದಿನಗಳಲ್ಲಿ ತಮ್ಮ ಪಡಿತರ ಪಡೆಯಬೇಕು ಎಂದು ಮನವಿ ಮಾಡಿದರು.

# ಹಳ್ಳಿ ಅಭಿವೃದ್ಧಿಯಾದರಷ್ಟೇ ರಾಷ್ಟ್ರ ಪ್ರಗತಿ

ಚನ್ನರಾಯಪಟ್ಟಣ: ದೇಶದ ಅಭಿವೃದ್ಧಿಯಾಗಬೇಕೆಂದರೆ ಹಳ್ಳಿಗಳು ಪ್ರಗತಿ ಸಾಧಿಸಬೇಕು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.



ತಾಲ್ಲೂಕಿನ ಬಿಳಿಕೆರೆ ಗ್ರಾಮದಲ್ಲಿ ಸಿಆರ್ ಎಫ್ ಯೋಜನೆಯಡಿ 1 ಕೋಟಿ ರೂ. ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಬುಧವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಯೋಜನೆಯಡಿ ಬಿಳಿಕೆರೆ ಗ್ರಾಮದಿಂದ ಮೂಕಿಕೆರೆ ವರೆಗೆ 1.4 ಕಿ.ಮೀ. ರಸ್ತೆಯನ್ನು 4 ಲೇಯರ್ ಡಾಂಬರ್ ಅಳವಡಿಸುವ ಮೂಲಕ ಗುಣಮಟ್ಟದೊಂದಿಗೆ ನಿರ್ಮಿಸಲಾಗುವುದು. 2025-26ನೇ ಸಾಲಿನಲ್ಲಿ ಅಗತ್ಯ ಅನುದಾನ ಮಂಜೂರಾತಿ ಮಾಡಿಸಿ ಬಿಳಿಕೆರೆಯಿಂದ ಉಂಗರಗೆರೆ ಗ್ರಾಮದ ರಸ್ತೆಯನ್ನು ಅಭಿವೃದ್ಧಿ ಪಡಿಸಲಾಗುವುದು ಎಂದು ತಿಳಿಸಿದರು.

ತೋಟಿಕೆರೆ ಏತನೀರಾವರಿ ಯೋಜನೆ ಪ್ರಗತಿಯಲ್ಲಿದ್ದು ಸಂಪರ್ಕ ಕಲ್ಪಿಸುವ ಕೆರೆಗಳಿಗೆ ಪೈಪ್‌ಲೈನ್ ಅಳವಡಿಕೆ ಕಾರ್ಯ ನಡೆಯುತ್ತಿದೆ. ದಿಡಗ ಕೆರೆ ಏತನೀರಾವರಿ ಯೋಜನೆಯನ್ನು ಕೈಗೆತ್ತಿಕೊಂಡಿದ್ದು ಬೋರ್ಡ್ ಮೀಟಿಂಗ್ ಹಂತದಲ್ಲಿದೆ.

ಅಂದು ಕೊಂಡಂತೆ ಆದರೆ ಮುಂದಿನ ದಿನಗಳಲ್ಲಿ ವ್ಯಾಪ್ತಿಯ ಕೆರೆಗಳಿಗೆ ನೀರು ಹರಿಸಲಾಗುವುದು ಎಂದರು.

ತಾಪಂ ಮಾಜಿ ಸದಸ್ಯ ಎಂ.ಆರ್. ವಾಸು, ಗ್ರಾಪಂ ಸದಸ್ಯರಾದ ಬಿಳಿಕೆರೆ ರಂಗೇಗೌಡ, ತುಪ್ಪದಹಳ್ಳಿ ಮಂಜೇಗೌಡ, ಪೃಥ್ವಿಕುಮಾರ್, ಬಾಹುಬಲಿ ಕೃಷಿ ರೈತ ಉತ್ಪಾದಕರ ಸಂಸ್ಥೆ ಅಧ್ಯಕ್ಷ ಬಿ.ಎನ್. ರಂಗಪ್ಪ, ಗುತ್ತಿಗೆದಾರ ಎಚ್.ಎನ್. ರಾಮೇಗೌಡ ಮತ್ತಿತರರು ಇದ್ದರು.

# ಯೂನಿಯನ್ ಬ್ಯಾಂಕ್‌ನಿಂದ ಮಹಿಳಾ ದಿನಾಚರಣೆ




ಹಾಸನ: ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಬುಧವಾರ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದಿಂದ ಹಾಸನ ಒಬೆಸಿಟಿ ಮತ್ತು ಡಯಾಬಿಟಿಕ್ ವೆಲ್ನೆಸ್ ಸೆಂಟರ್ ಸಹಯೋಗದಲ್ಲಿ ವಾಕಥಾನ್ ನಡಿಗೆ ಮತ್ತು ರಕ್ತದೊತ್ತಡ ಪರೀಕ್ಷೆ ಹಮ್ಮಿಕೊಳ್ಳಲಾಗಿತ್ತು.

ಬ್ಯಾಂಕ್ ಪ್ರಾದೇಶಿಕ ಮುಖ್ಯಸ್ಥ ಅರುಣ್ ಕುಲಕರ್ಣಿ ಮಾತನಾಡಿ, ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಹೆಲ್ತ್ ಕ್ಯಾಂಪ್ ಮತ್ತು ವಾಕಥಾನ್ ನಡೆಸಲಾಗುತ್ತಿದೆ. ಗ್ರಾಹಕರಿಗಾಗಿ

ಆರೋಗ್ಯ ಶಿಬಿರ ಆಯೋಜಿಸಲಾಗಿದೆ. ಜಿಲ್ಲಾ ಕ್ರೀಡಾಂಗಣದಲ್ಲಿ ಹೆಚ್ಚು ಮಂದಿ ವಾಯು ವಿಹಾರಕ್ಕೆ ಬರುವುದರಿಂದ ಆರೋಗ್ಯ ಶಿಬಿರ ಆಯೋಜಿಸಲಾಗಿದೆ. ಸಾರ್ವಜನಿಕರು ಸದುಪಯೋಗ ಪಡೆಯುತ್ತಿದ್ದಾರೆ ಎಂದರು.

ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ದೇಶದ ಸದೃಢ ಬ್ಯಾಂಕ್. ದೇಶದಲ್ಲೇ ಐದನೇ ದೊಡ್ಡ ಬ್ಯಾಂಕ್ ಆಗಿದೆ ಎಂದರು. ಬ್ಯಾಂಕ್ ವ್ಯವಸ್ಥಾಪಕ ಸಿ. ರಾಜೇಶ್, ಅರುಣ್ ಕುಮಾರ್, ಬ್ಯಾಂಕ್ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಜಿ.ಟಿ. ಲೋಕೇಶ್ ಇತರಿದ್ದರು.

# ದಾರಿ ಕೇಳುವ ನೆಪದಲ್ಲಿ ಚಿನ್ನ ಕಸಿದು ಪರಾರಿ

ಸಕಲೇಶಪುರ: ದಾರಿ ಕೇಳುವ ನೆಪದಲ್ಲಿ ಚಲಿಸುತ್ತಿದ್ದ ಬೈಕ್ ಸಮೀಪ ಬಂದ ಅಪರಿಚಿತರು ಮಹಿಳೆ ಕೊರಳಿನಿಂದ 5 ಲಕ್ಷ ರೂ. ಮೌಲ್ಯದ ಚಿನ್ನದ ಸರ ದೋಚಿ ಪರಾರಿಯಾಗಿದ್ದಾರೆ.

ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ಹೆಗ್ಗಡಿಹಳ್ಳಿ ಗ್ರಾಮದ ಸುನಿತಾ ಅವರು ನಿಡಿಗೆರೆಯ ಅಕ್ಕನ ಮನೆಗೆ ಬಂದಿದ್ದಾಗ ಕಳ್ಳತನವಾಗಿದೆ. ಅಕ್ಕ ಶೋಭಾ ಹಾಗೂ ಭಾವ ಚಂದ್ರಣ್ಣ ಅವರ ಜೊತೆಗೆ ತ್ರಿಪುರ ಸುಂದರಿ ದೇವಸ್ಥಾನದಿಂದ ವಾಪಸ್ ಬರುತ್ತಿದ್ದಾಗ ಬೈಕ್‌ನಲ್ಲಿ ಹಿಂಬಾಲಿಸಿದ ಅಪರಿಚಿತರಿಬ್ಬರು ಹೆನ್ನಲಿ ಸಮೀಪ ವಿಳಾಸ ಕೇಳುವ ನೆಪದಲ್ಲಿ ಹತ್ತಿರ ಬಂದು ಕೊರಳಿನಿಂದ 55 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ ಹಾಗು 15 ಗ್ರಾಂ ತೂಕದ ಚಿನ್ನದ ಚೈನ್ ಅನ್ನು ಕಿತ್ತುಕೊಂಡು ಪರಾರಿಯಾಗಿದ್ದಾರೆ. ಯಸಳೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಟ್ರ್ಯಾಕ್ಟರ್ ಪಲ್ಟಿ: ವ್ಯಕ್ತಿ ಸಾವು

ಹೊಳೆನರಸೀಪುರ: ತಾಲ್ಲೂಕಿನ ಕಳ್ಳಿಕೊಪ್ಪಲು ಗ್ರಾಮದ ನಂದಿಕಲ್ಲು ಬಾರೆಯಲ್ಲಿ ಚಾಲಕನ ನಿಯಂತ್ರಣ ತಪ್ಪಿ ಟ್ರ್ಯಾಕ್ಟರ್ ಪಲ್ಟಿಯಾಗಿ ವೃದ್ಧ ಮೃತಪಟ್ಟಿದ್ದಾರೆ.

ಅರಕಲಗೂಡು ತಾಲ್ಲೂಕು ಹರದೂರು ಗ್ರಾಮದ ಜವರೇಗೌಡ (60) ಮೃತರು. ಅದೇ ಊರಿನ ಹೆಚ್.ಬಿ. ಲೋಕೇಶ್ ಅವರೊಂದಿಗೆ ಅಡಿಕೆ ಮರಗಳನ್ನು ತರಲು ಹೊಳೆನರಸೀಪುರಕ್ಕೆ ತೆರಳಿದ್ದರು. ಸಂಜೆ 7 ಗಂಟೆ ಸಮಯದಲ್ಲಿ ಊರಿಗೆ ವಾಪಾಸ್ಸಾಗುತ್ತಿದ್ದಾಗ ಹೊಳೆನರಸೀಪುರ-ಪಡುವಲಹಿಪ್ಪೆ ಮಾರ್ಗದ ಕಳ್ಳಿಕೊಪ್ಪಲು ಬಾರೆ ಬಳಿ ಇಳಿಜಾರಿನಲ್ಲಿ ಟ್ರ್ಯಾಕ್ಟರ್ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ.

ಜವರೇಗೌಡ ಅವರ ಕಾಲುಗಳು ಮುರಿದು ತಲೆಗೆ ಬಲವಾದ ಗಾಯಗಳಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಲೋಕೇಶ್ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಚಿನ್ನಾಭರಣ ದೋಚಿ ಪರಾರಿ

ಹಾಸನ: ಮನೆ ಗೇಟ್ ಸಮೀಪ ಬಂದ ಅಪರಿಚಿತರಿಬ್ಬರು ಮಹಿಳೆಯ ಕೊರಳಿನಲ್ಲಿದ್ದ 60 ಗ್ರಾಂ ತೂಕದ ಚಿನ್ನದ ಸರ ದೋಚಿ ಪರಾರಿಯಾಗಿರುವ ಘಟನೆ ನಗರದ ಕೆ.ಆರ್. ಪುರಂನಲ್ಲಿ ನಡೆದಿದೆ.

ರಾಜೇಶ್ವರಿ ಎಂಬುವವರು ರಾತ್ರಿ 8 ಗಂಟೆ ವೇಳೆ ಮನೆ ಮುಂದೆ ನಿಂತಿದ್ದಾಗ ಸ್ಕೂಟರ್‌ನಲ್ಲಿ ಮುಖಗವಸು ಧರಿಸಿ ಬಂದ ಅಪರಿಚಿತರಿಬ್ಬರು ಏಕಾಏಕಿ ಕೊರಳಿನಿಂದ 50 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ ಹಾಗೂ 10 ಗ್ರಾಂ ತೂಕದ ಚಿನ್ನದ ಚೈನ್ ಕಿತ್ತುಕೊಂಡು ಪರಾರಿಯಾಗಿದ್ದಾರೆ. 3.60 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳುವಾಗಿದೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಆಟೋ ಡಿಕ್ಕಿ: ಯುವಕ ಸಾವು

ಬೇಲೂರು: ತಾಲ್ಲೂಕಿನ ಮಾಯಗೊಂಡನಹಳ್ಳಿ-ಚಟಚಟನಹಳ್ಳಿ ಮಾರ್ಗಮಧ್ಯೆ ಸಂಭವಿಸಿದ ಪ್ಯಾಸೆಂಜರ್ ಆಟೋ ಹಾಗೂ ಬೈಕ್ ಡಿಕ್ಕಿಯಿಂದ ಯುವಕ ಮೃತಪಟ್ಟಿದ್ದಾನೆ. ತಾಲ್ಲೂಕಿನ ಚಟಚಟನಹಳ್ಳಿ ಗ್ರಾಮದ ರಾಜು (25) ಮೃತರು. ಸ್ನೇಹಿತರಾದ ಮಹೇಶ ಹಾಗೂ ಕಾರ್ತಿಕ್ ಗಾಯಾಳುಗಳು. ಮೂವರು ಮಾಯಗೊಂಡನ ಹಳ್ಳಿಯಿಂದ ಊರಿಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ ಎದುರುಗಡೆಯಿಂದ ಬಂದ ಪ್ಯಾಸೆಂಜರ್ ಆಟೋ ಡಿಕ್ಕಿಯಾಗಿದೆ. ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಿಂಗಲ್ ಫೇಸ್ ಕೃಷಿ ಪಂಪ್ ಸೆಟ್ ಬಳಸದಂತೆ ಮನವಿ

ಹಾಸನ: ಹಾಸನ ಜಿಲ್ಲೆಯ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ವ್ಯಾಪ್ತಿಯಲ್ಲಿ ರಾತ್ರಿವೇಳೆ ಸಿಂಗಲ್ ಫೇಸ್ ಕೃಷಿ ಪಂಪ್ ಸೆಟ್ ಬಳಸಬೇಡಿ. ಇದರಿಂದಾಗಿ ತೋಟದ ವಾಸಿಗಳಿಗೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ನಿತ್ಯ ಸಂಜೆ 6 ಗಂಟೆಯಿಂದ ಬೆಳಗ್ಗೆವರೆಗೆ ನೀರಾವರಿ ಫೀಡರ್‌ಗಳ ಮೂಲಕ ತೋಟದ ಮನೆಗಳ ಗೃಹ ಬೆಳಕಿಗೆ ಹಾಗೂ ಅಲ್ಲಿ ವಾಸಿಸುವ ವಿದ್ಯಾರ್ಥಿಗಳಿಗಾಗಿ ಸಿಂಗಲ್ ಫೇಸ್ ವಿದ್ಯುತ್ತನ್ನು ಓಪನ್ ಡೆಲ್ಟಾ ಮೂಲಕ ನೀಡಲಾಗುತ್ತಿದೆ. ಈ ಸಮಯದಲ್ಲಿ ಸಿಂಗಲ್ ಫೇಸ್ ಕೃಷಿ ಪಂಪ್ ಸೆಟ್‌ಗಳನ್ನು ಬಳಸಬಾರದು ಎಂದು ರೈತರಿಗೆ ಮನವಿ ಮಾಡಲಾಗಿದೆ.

ಹೀಗೆ ಸಿಂಗಲ್ ಫೇಸ್ ವಿದ್ಯುತ್ ಪೂರೈಸುವಾಗ ಕೆಲವರು ಕೃಷಿ ಪಂಪ್ ಸೆಟ್‌ಗಳನ್ನು ನೀರಾವರಿ ಫೀಡರ್ ಮೂಲಕ ಬಳಸುತ್ತಿದ್ದು, ಇದರಿಂದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತಿದೆ. ಇದರಿಂದಾಗಿ ಕಾಡಂಚಿನ ಪ್ರದೇಶಗಳಲ್ಲಿ ವಾಸವಾಗಿರುವ ಜನರಿಗೆ ಮತ್ತು ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿದೆ. ಆದ್ದರಿಂದ ಈ ಸಮಯದಲ್ಲಿ ಸಿಂಗಲ್ ಫೇಸ್ ಕೃಷಿ ಪಂಪ್‌ಸೆಟ್ ಬಳಸದಂತೆ ಮನವಿ ಮಾಡಲಾಗುತ್ತಿದೆ.

ಒಂದು ವೇಳೆ ರಾತ್ರಿ ವೇಳೆಯಲ್ಲಿ ಸಿಂಗಲ್ ಫೇಸ್‌ನಲ್ಲಿ ಪಂಪ್ ಸೆಟ್‌ಗಳು ಚಾಲನೆ ಮಾಡಿ ಫೀಡರ್ ಟ್ರಿಪ್ ಆಗುವುದರಿಂದ ವಿದ್ಯುತ್ ವ್ಯತ್ಯಯವಾದಲ್ಲಿ ನಿಗಮವು ಜವಾಬ್ದಾರಿಯಾಗಿರುವುದಿಲ್ಲ.

ಆದ್ದರಿಂದ ರಾತ್ರಿ ವೇಳೆಯಲ್ಲಿ ಸಿಂಗಲ್ ಫೇಸ್‌ನಲ್ಲಿ ಪಂಪ್ ಸೆಟ್‌ಗಳನ್ನು ಚಾಲನೆಗೊಳಿಸಬಾರದು ಎಂದು ಚಾ.ವಿ.ಸ.ನಿ.ನಿಯಮಿತದ ಹಾಸನ ಕಾರ್ಯ ಮತ್ತು ಪಾಲನಾ ವೃತ್ತದ ಅಧೀಕ್ಷಕ ಇಂಜಿನಿಯರ್(ವಿ) ತಿಳಿಸಿದ್ದಾರೆ.

# ಚೈತ್ರ ನಾಯಕರಹಳ್ಳಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷೆ



ಹಾಸನ: ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ಚೈತ್ರ ನಾಯಕರಹಳ್ಳಿ ನೇಮಕವಾಗಿದ್ದಾರೆ.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಕೆ. ನಾಗೇಶ ಹಾಗೂ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ನುಗ್ಗಲಿ ನೇಮಕದ ಆದೇಶ ಪ್ರಕಟಿಸಿದ್ದಾರೆ. ಅಣ್ಣಪ್ಪ ಅವರು ಮಾ. 5 ರಂದು ಸ್ವ-ಇಚ್ಛೆಯಿಂದ ರಾಜೀನಾಮೆ ನೀಡಿದ್ದರು. ತಾಲ್ಲೂಕಿನ ಬ್ಯಾಡರಹಳ್ಳಿ ಸರ್ಕಾರಿ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿ ಚೈತ್ರ ನಾಯಕರಹಳ್ಳಿ ಅವರನ್ನು ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಪರಿಗಣಿಸಲಾಗಿದೆ.

ಚೈತ್ರ ನಾಯಕರಹಳ್ಳಿ ಅವರು ಜಿಲ್ಲಾ ವಚನ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಹ ಕಾರ್ಯದರ್ಶಿ, ತಾಲ್ಲೂಕು ಭಾರತ ಸೇವಾ ದಳದ ನಿರ್ದೇಶಕಿಯಾಗಿ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ.

# ಪುರಸಭೆ ಮಳಿಗೆ ಮರು ಹರಾಜಿಗೆ ನಿರ್ಧಾರ

ಸಕಲೇಶಪುರ: ಮೂರು ಹಂತದಲ್ಲಿ ಪುರಸಭೆ ವಾಣಿಜ್ಯ ಮಳಿಗೆಗಳ ಮರು ಹರಾಜು ನಡೆಸಲಾಗುವುದು ಎಂದು ಪುರಸಭೆ ಅಧ್ಯಕ್ಷೆ ಜ್ಯೋತಿ ರಾಜ್ ಕುಮಾರ್ ಹೇಳಿದರು.



ಪುರಸಭೆ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ವಿಶೇಷ ಸಭೆಯಲ್ಲಿ ಮಾತನಾಡಿ, ಜಿಲ್ಲಾಧಿಕಾರಿ ನಿರ್ದೇಶನದಂತೆ ಪುರಸಭೆಗೆ ಸೇರಿದ 169 ಮಳಿಗೆಗಳನ್ನು ಹರಾಜು ಮಾಡಲು ಸಿದ್ಧತೆ ನಡೆಸಲಾಗಿದೆ. ಅದರಲ್ಲಿ ಶೇ. 18 ರಷ್ಟು ಪರಿಶಿಷ್ಟ ಜಾತಿ ಹಾಗೂ ಪಂಗಡಕ್ಕೆ ಮೀಸಲಿಡಲಾಗಿದೆ. ಮೊದಲ ಹಂತದಲ್ಲಿ ಬಸವೇಶ್ವರ ರಸ್ತೆಯ 34 ಹಾಗೂ ವಿಜಯ ಬ್ಯಾಂಕ್ ವಾಣಿಜ್ಯ ಸಂಕೀರ್ಣದ 20 ಮಳಿಗೆಗಳನ್ನು ಹರಾಜು ಮಾಡಲು ಉದ್ದೇಶಿಸಲಾಗಿದೆ. ಮೀಸಲಾತಿಯಂತೆ ಬಸವೇಶ್ವರ ರಸ್ತೆಯ 9,17,27,28 ಹಾಗೂ 32 ಮತ್ತು ವಿಜಯ ಬ್ಯಾಂಕ್ ವಾಣಿಜ್ಯ ಸಂಕೀರ್ಣದ 4,8 ಹಾಗೂ 16ನೇ ಮಳಿಗೆಗಳು ಮೀಸಲಿಗೆ ಒಳಪಟ್ಟಿದೆ ಎಂದರು.

ತೆರಿಗೆ ಹೆಚ್ಚಳಕ್ಕೆ ವಿರೋಧ: ಸರ್ಕಾರದ ನಿರ್ದೇಶನದಂತೆ ಪುರಸಭೆ ವ್ಯಾಪ್ತಿಯಲ್ಲಿನ ಎಲ್ಲ ತರಹದ ಆಸ್ತಿಗಳ ಮೇಲೆ ಶೇ. 3 ರಿಂದ 5 ರಷ್ಟು ತೆರಿಗೆ ಹೆಚ್ಚಳಕ್ಕೆ ಸರ್ಕಾರ ನಿರ್ದೇಶನ ನೀಡಿದೆ ಎಂಬ ವಿಚಾರದ ಚರ್ಚೆಯಲ್ಲಿ ಮಧ್ಯ ಪ್ರವೇಶಿಸಿದ ಸದಸ್ಯ ಆದರ್ಶ್, ಈಗಾಗಲೇ ಎಲ್ಲ ವಸ್ತುಗಳ ಬೆಲೆ ಏರಿಕೆಯಿಂದ ಸಾಮಾನ್ಯ ಜನರು ತತ್ತರಿಸಿದ್ದಾರೆ. ಸರ್ಕಾರ ಪುರಸಭೆ ಆಸ್ತಿ ತೆರಿಗೆ ಹೆಚ್ಚಳ ಮಾಡುವುದಕ್ಕೆ ಮುಂದಾಗಿದೆ. ಆದ್ದರಿಂದ ಈ ವರ್ಷ ತೆರಿಗೆ ಹೆಚ್ಚಳ ಮಾಡುವುದು ಬೇಡ ಇದಕ್ಕೆ ಸಭೆಯಲ್ಲಿ ವಿರೋಧವಿದೆ ಎಂದು ನಿರ್ಣಯ ಮಾಡಿ ಸರ್ಕಾರಕ್ಕೆ ಕಳುಹಿಸಿ ಎಂದರು. ಮಧ್ಯಪ್ರವೇಶಿಸಿ ಮಾತನಾಡಿದ ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ ಹಾಗೆ ಮಾಡಲು ಸಾಧ್ಯವಿಲ್ಲ. ಒಂದು ವೇಳೆ ತೆರಿಗೆ ಹೆಚ್ಚಳ ಮಾಡಲು ಸಾಧ್ಯವಿಲ್ಲ ಎಂದು ನಿರ್ಣಯಿಸಿದರೆ ಮುಂದಿನ ಹಂತದಲ್ಲಿ ಸರ್ಕಾರದಿಂದ ಅಭಿವೃದ್ಧಿಗೆ ಅನುದಾನ ಬಿಡುಗಡೆಯಾಗುವುದಿಲ್ಲ ಎಂದರು.

ತೆರಿಗೆ ಹಚ್ಚಳ ಮಾಡಲೇಬೇಕು ಎನ್ನುವುದಾದರೆ ಸಭೆಗೆ ಈ ವಿಚಾರ ಏಕೆ ತಂದಿದ್ದು ಎಂದು ಸದಸ್ಯ ಆದರ್ಶ್ ಆಕ್ಷೇಪ ವ್ಯಕ್ತಪಡಿಸಿದರು. ಮುಂದುವರೆದ ಸಭೆಯಲ್ಲಿ ಅಧಿಕಾರಿಗಳ ತಪ್ಪಿನಿಂದ 15ನೇ ಹಣಕಾಸಿನ 1.15 ಕೋಟಿ ರೂ. ಅನುದಾನ ಬಿಡುಗಡೆಯಾಗದಿರುವ ಬಗ್ಗೆ ಚರ್ಚೆ ನಡೆಸಲಾಯಿತು. ತಾರ್ಕಿಕ ಅಂತ್ಯ ಕಾಣದೆ ಮುಂದಿನ ವಿಷಯಕ್ಕೆ ಸಭೆ ಮುಂದುವರೆಯಿತು. ಮುಖ್ಯಮಂತ್ರಿ ಅನುದಾನದಲ್ಲಿ ನಡೆಯುತ್ತಿರುವ ಹಲವು ಕಾಮಗಾರಿಗಳನ್ನು ಗುತ್ತಿಗೆದಾರರು ಕೈಗೆತ್ತಿಕೊಳ್ಳದೆ ಕಾಲಹರಣ ಮಾಡುತ್ತಿದ್ದಾರೆ ಎಂಬ ವಿಚಾರ ಚರ್ಚೆಗೆ ಬಂದಿದ್ದು ಈ ಬಗ್ಗೆ ನಿಗಾ ವಹಿಸುವಂತೆ ಪುರಸಬೆ ಎಂಜಿನೀಯರ್ ಅವರಿಗೆ ಸೂಚನೆ ನೀಡಲಾಯಿತು. ಕಳೆದ ಎರಡು ವರ್ಷದ ಸಕಲೇಶ್ವರಸ್ವಾಮಿ ದನಗಳ ಜಾತ್ರೆ ವಸ್ತುಪ್ರದರ್ಶನದ ಖರ್ಚಿನಲ್ಲಿ ಭ್ರಷ್ಟಾಚಾರ ನಡೆದಿದ್ದು ಪುರಸಭೆ ಲೆಕ್ಕ ಪರಿಶೋಧನೆ ನಡೆಸಿರುವ ವ್ಯಕ್ತಿ ಲೆಕ್ಕ ಪಕ್ಕ ಇದೆ ಎಂದು ವರದಿ ನೀಡಿದ್ದಾರೆ. ಪುರಸಭೆ ಸಾಮಾನ್ಯ ಸಭೆಯಲ್ಲಿ ಈ ವಿಚಾರವನ್ನು ಗಣನೆಗೆ ತಾರದೆ ಅಧಿಕಾರಿಗಳು ಲೆಕ್ಕಪತ್ರಗಳನ್ನು ಅನುಮೋದಿಸಿದ್ದಾರೆ. ಉಪಾಧ್ಯಕ್ಷೆ ಝರೀನಾ ಉಪಸ್ಥಿತರಿದ್ದರು.

# ನಬಾರ್ಡ್‌ನಿಂದ ದಿಡಗದಲ್ಲಿ ಮಹಿಳಾ ದಿನಾಚರಣೆ



ಚನ್ನರಾಯಪಟ್ಟಣ: ಸಿರಿಧಾನ್ಯಗಳಿಂದ ಸಿದ್ಧಪಡಿಸಿದ ಆಹಾರ ಸೇವನೆಯು ಆರೋಗ್ಯ ವೃದ್ಧಿಗೆ ಸಹಕಾರಿ ಎಂದು ಜಿಲ್ಲಾ ನಬಾರ್ಡ್ ಡಿಡಿಎಂ ಮಾಲಿನಿ ಎಸ್. ಸುವರ್ಣ ಹೇಳಿದರು.

ತಾಲ್ಲೂಕಿನ ದಿಡಗ ಗ್ರಾಮದಲ್ಲಿ ನಬಾರ್ಡ್ ವತಿಯಿಂದ ಬಾಹುಬಲಿ ರೈತ ಉತ್ಪಾದಕ ಕಂಪನಿ ಹಾಗೂ ಸ್ನೇಹ ಸೇವಾ ಸಂಸ್ಥೆ ಸಹಯೋಗದಲ್ಲಿ ಮಹಿಳಾ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಿರಿಧಾನ್ಯಗಳ ಮೌಲ್ಯವರ್ಧನೆ ಮೂಲಕ ಆಹಾರ ಉತ್ಪನ್ನಗಳನ್ನು ತಯಾರು ಮಾಡುವ ತರಬೇತಿಯನ್ನು ನಬಾರ್ಡ್ 90 ಮಹಿಳೆಯರಿಗೆ ನೀಡಿದೆ. ಮಹಿಳೆಯರು ತನ್ನ ಕುಟುಂಬದ ಆರ್ಥಿಕ ಪ್ರಗತಿಯಲ್ಲಿ ಪಾಲುದಾರಳಾಗಬೇಕೆಂಬ ಹಿನ್ನೆಲೆಯಲ್ಲಿ ಹಲವು ತರಬೇತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಅಲ್ಲದೆ ಬಾಹುಬಲಿ ಕೃಷಿ ರೈತ ಉತ್ಪಾದಕ ಕಂಪನಿ ಮೂಲಕ ಮಾರುಕಟ್ಟೆ ವ್ಯವಸ್ಥೆಯನ್ನೂ ಕಲ್ಪಿಸಿ ಕೊಟ್ಟಿದೆ. ಎಲ್ಲ ಕ್ಷೇತ್ರಗಳಲ್ಲಿ ಮಹಿಳೆ ತನ್ನನ್ನು ತೊಡಗಿಸಿಕೊಳ್ಳುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಅದರಿಂದ ಅದೆಷ್ಟೋ ಕುಟುಂಬಗಳು ಸದೃಢಗೊಳ್ಳಲಿವೆ ಎಂದರು.

ಸ್ನೇಹ ಸೇವಾ ಸಂಸ್ಥೆಯ ಸಂಸ್ಥಾಪಕ ಎಸ್.ಜಿ. ಚಕ್ರವರ್ತಿ ಮಾತನಾಡಿ, ಮಹಿಳೆಯರಿಗೆ ಸಂಸ್ಥೆಯು ಹೈನುಗಾರಿಕೆ ಹಾಗೂ ಕರಕುಶಲ ತರಬೇತಿ ಸೇರಿದಂತೆ ಇತರ ಉದ್ಯೋಗಾಧಾರಿತ ಚಟುವಟಿಕೆಗಳ ತರಬೇತಿ ನೀಡುವಲ್ಲಿ ನೆರವಾಗಿದೆ ಎಂದು ತಿಳಿಸಿದರು.


ಕಂದಲಿ ಕೃಷಿ ವಿಜ್ಞಾನ ಕೇಂದ್ರದ ಡಾ. ಶಿವಶಂಕರ್, ದಿಡಗ ಆರೋಗ್ಯ ಕೇಂದ್ರದ ಡಾ. ವರಲಕ್ಷ್ಮೀ, ಬಾಹುಬಲಿ ಸಂಸ್ಥೆಯ ಅಧ್ಯಕ್ಷ ಬಿ.ಎನ್. ರಂಗಪ್ಪ ಇತರರಿದ್ದರು.

# ಸ್ವರ್ಗ ನಾ ಕಂಡಂತೆ ಓದಲೇಬೇಕಾದ ಕೃತಿ

ಇಂಗ್ಲೀಷ್‌ನಲ್ಲಿ The heaven as I saw ಎಂಬ ಶಿರೋನಾಮೆಯಡಿ ಡಾ. ರಂಜನ್ ಪೇಜಾವರ್ ಬರೆದ ಕಾದಂಬರಿಯನ್ನು ಟಸ್ವರ್ಗ ನಾ ಕಂಡಂತೆಟ ಎಂಬುದಾಗಿ ಸತ್ಯಕಾಮ ಶರ್ಮಾರವರು ಕನ್ನಡಿಸಿದ್ದಾರೆ.

ಸತ್ತು ಸ್ವರ್ಗ ಸೇರಿದಂತೆ ಕನಸು ಕಾಣುವ ಮಾಮೂಲಿ ವ್ಯಕ್ತಿಯ ಕುರಿತ ಕಾದಂಬರಿ ಇದಾಗಬಹುದಿತ್ತು. ಅಂತಲ್ಲದೆ ಹಲವು ಪಾತ್ರಗಳ ಸಾವು ಬದುಕಿನ ಸತ್ಯಾಸತ್ಯತೆಗಳ ಜೊತೆ ತುಲನೆ ಮಾಡುವ, ಏನಾಗಿದ್ದರೇನಾಗಬಹುದಾಗಿತ್ತು ಎಂದು ಚರ್ಚೆ ಮಾಡುವ ಚಿಂತನಾತ್ಮಕ ಕಾದಂಬರಿಯಾಗಿ ಡಾ. ರಂಜನ್ ಪೇಜಾವರ್ ಟಸ್ವರ್ಗ ನಾ ಕಂಡಂತೆಟಯನ್ನು ರಚಿಸಿದ್ದಾರೆ.

ಮೂಲತಃ ಡಾಕ್ಟರ್ ಆಗಿರುವ ರಂಜನ್ ಪೇಜಾವರ್ ತನ್ನ ಕಥಾ ನಾಯಕನ ಸಾವು-ಬದುಕುಗಳಿಗೆ ವೈದ್ಯಕೀಯ ಶಾಸ್ತ್ರದ ಸಮರ್ಥನೆಗಳನ್ನಿತ್ತು, ಆತನನ್ನು ಗಂಧರ್ವನೊಂದಿಗೆ ಸ್ವರ್ಗದತ್ತ ಒಯ್ಯುತ್ತಾರೆ. ಬಳಿಕ ಭೂಮಿಯಲ್ಲಿ ಸ್ವಕಾಯ ಪ್ರವೇಶ ಮಾಡಿಸುತ್ತಾರೆ. ಸ್ವರ್ಗಲೋಕ ಕಂಡು ಬಂದ ಕಥಾನಾಯಕ ಭುವಿಯಲ್ಲಿ ತನ್ನ ಮುಂದಿನ ಬದುಕನ್ನು ಹೇಗೆ ನಿಭಾಯಿಸಬಲ್ಲ. ಆತ ತನ್ನ ಕಣ್ಣೆದುರಿಗಿರುವ ಮಂದಿಯನ್ನು ಸ್ವರ್ಗಕ್ಕಾಗಿ ಹೇಗೆ ತಯಾರು ಮಾಡಬಲ್ಲ. ಹಾಗೆ ತಯಾರಿ ಮಾಡುವ ಸಂದರ್ಭವನ್ನು ಲೋಕ ಒಪ್ಪೀತ. ಕಥಾನಾಯಕ ಹುಚ್ಚನಾದನೆ? ಇತ್ಯಾದಿ ಚರ್ಚೆಗಳನ್ನು- ವೈಜ್ಞಾನಿಕ ದೃಷ್ಟಿಕೋನವನ್ನೂ ಒಳಗೊಂಡಂತೆ ಲೇಖಕರು ಪರೀಕ್ಷೆಗೊಡ್ಡಿದಾರೆ. ಕಥಾನಾಯಕ ಮೊಮ್ಮಗ ಗುಡ್ಡುವಿನ




ಬದುಕಿನಲ್ಲಿ ಇದು ಕಾಲ್ಪನಿಕ ಕತೆಯಾಗಿ ನಿಲ್ಲುವುದೋ ಅಥವಾ ಅಜ್ಜನ ಟನಿಜದ ಅನುಭವಟ ತನ್ನದೂ ಆಗುವುದೋ ಎಂಬುದನ್ನು ಕಾದಂಬರಿ ಓದಿದ ಬಳಿಕ ಓದುಗರು ಯೋಚನೆ ಮಾಡಬೇಕಾಗುತ್ತದೆ.

ಸತ್ಯಕಾಮ ಶರ್ಮಾರವರು ಮೂಲ ಕಾದಂಬರಿಯ ಆಂತರ್ಯವನ್ನು ಬಹಳ ಚನ್ನಾಗಿ ಕನ್ನಡೀಕರಿಸಿದ್ದಾರೆ. ಕನ್ನಡ ಕಾದಂಬರಿ ಲೋಕಕ್ಕೆ ಈ ಕೃತಿ ಒಂದು ವಿನೂತನ ಪ್ರಯೋಗ. 176 ಪುಟಗಳನ್ನೊಳಗೊಂಡ ಕೃತಿಯನ್ನು ಬೆಂಗಳೂರಿನ ಸ್ನೇಹ ಬುಕ್ ಹೌಸ್ ಪ್ರಕಟಿಸಿದೆ. ಕೃತಿಯ ಮೂಲಬೆಲೆ 220 ರೂ. ಆಸಕ್ತ ಓದುಗರಿಗೆ ಸಾಗರದ ಚಾಮರಾಜಪೇಟೆಯ ರವೀಂದ್ರ ಪುಸ್ತಕಾಲಯದಲ್ಲಿ ಆಕರ್ಷಕ ರಿಯಾಯಿತಿ ದರದಲ್ಲಿ ಲಭ್ಯವಿರುತ್ತದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248

C M Y K C M Y K C M Y K C M Y K